FRNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

**ವಿಶೇಷ ರಾಜ್ಯ ಪತ್ರಿಕೆ**



| ಭಾಗ-III Part-III | ಬೆಂಗಳೂರು, ಗುರುವಾರ, ಮೇ ೨, ೨೦೧೯ (ವೈಶಾಖ ೧೨, ಶಕ ವರ್ಷ ೧೯೪೦) Bengaluru, Thursday, May 2, 2019 (Vaisakha 12, Shaka Varsha 1940) | ನಂ. ೩೨೮ No. 328 |
|---|---|---|



ರಾಜ್ಯ ಚುನಾವಣಾ ಆಯೋಗ, ಕರ್ನಾಟಕ

1ನೇ ಮಹಡಿ, ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಂಡಳಿ ಕಟ್ಟಡ (ಹಿಂಭಾಗ), ನಂ. 8, ಕನ್ನಿಂಗ್‌ಹ್ಯಾಂ ರಸ್ತೆ, ಬೆಂಗಳೂರು-52.

**ನಗರ ಸ್ಥಳೀಯ ಸಂಸ್ಥೆಗಳ ಉಪಚುನಾವಣೆ-2019**

**ನಂ.ರಾಚುಆ.14.ಇಯುಬಿ.2019, ಬೆಂಗಳೂರು, ದಿನಾಂಕ: 02-05-2019**

ರಾಜ್ಯ ಚುನಾವಣಾ ಆಯೋಗವು ಈ ಕೆಳಗೆ ನಮೂದಿಸಿರುವ ನಗರ ಸ್ಥಳೀಯ ಸಂಸ್ಥೆಗಳ ವಾರ್ಡುಗಳಲ್ಲಿ ವಿವಿಧ ಕಾರಣಗಳಿಂದ ತೆರವಾಗಿರುವ ಸದಸ್ಯ ಸ್ಥಾನಕ್ಕೆ ಈ ಕೆಳಗಿನ ಚುನಾವಣಾ ವೇಳಾಪಟ್ಟಿಯಂತೆ ಉಪಚುನಾವಣೆಯನ್ನು ನಡೆಸಲು ಕರ್ನಾಟಕ ಮುನಿಸಿಪಾಲಿಟೀಸ್ (ಕೌನ್ಸಿಲರುಗಳ ಚುನಾವಣೆ) ನಿಯಮಗಳು 1977 ರ ನಿಯಮ 3(1) ರಂತೆ ಆದೇಶಿಸಿದೆ.

| ಕ್ರ.ಸಂ. | ಜಿಲ್ಲೆ | ನಗರ ಸ್ಥಳೀಯ ಸಂಸ್ಥೆಯ ಹೆಸರು | ವಾರ್ಡ್ ನಂ. |
|---|---|---|---|
| 1. | ಬೆಂಗಳೂರು ನಗರ | ಹೆಬ್ಬಗೋಡಿ ನಗರಸಭೆ | 26 |
| 2. | ಬೆಳಗಾವಿ | ಸದಲಗಾ ಪುರಸಭೆ | 19 |
| | | ಮುಗಳಖೋಡ ಪುರಸಭೆ | 02 |

**ಚುನಾವಣಾ ವೇಳಾ ಪಟ್ಟಿ**

| | | |
|---|---|---|
| 1. | ಜಿಲ್ಲಾಧಿಕಾರಿಗಳು ಚುನಾವಣಾ ಅಧಿಸೂಚನೆಯನ್ನು ಹೊರಡಿಸುವ ದಿನಾಂಕ ಮತ್ತು ದಿನ | 09-05-2019 ಗುರುವಾರ |
| 2 | ನಾಮಪತ್ರಗಳನ್ನು ಸಲ್ಲಿಸಲು ಕೊನೆಯ ದಿನಾಂಕ ಮತ್ತು ದಿನ | 16-05-2019 ಗುರುವಾರ |
| 3 | ನಾಮಪತ್ರಗಳನ್ನು ಪರಿಶೀಲಿಸುವ ದಿನಾಂಕ ಮತ್ತು ದಿನ | 17-05-2019 ಶುಕ್ರವಾರ |
| 4 | ಉಮೇದುವಾರಿಕೆಗಳನ್ನು ಹಿಂತೆಗೆದುಕೊಳ್ಳಲು ಕೊನೆಯ ದಿನಾಂಕ ಮತ್ತು ದಿನ | 20-05-2019 ಸೋಮವಾರ |
| 5 | ಮತದಾನ ಅವಶ್ಯವಿದ್ದರೆ, ಮತದಾನವನ್ನು ನಡೆಸ ಬೇಕಾದ ದಿನಾಂಕ ಮತ್ತು ದಿನ ಸಮಯ ಬೆಳಿಗ್ಗೆ 7.00 ಘಂಟೆಯಿಂದ ಸಾಯಂಕಾಲ 5.00 ಘಂಟೆವರೆಗೆ | 29-05-2019 ಬುಧವಾರ |
| 6 | ಮರು ಮತದಾನ ಇದ್ದಲ್ಲಿ ಮತದಾನದ ಸಮಯ ಬೆಳಿಗ್ಗೆ 7.00 ಘಂಟೆಯಿಂದ ಸಾಯಂಕಾಲ 5.00 ಘಂಟೆವರೆಗೆ | 30-05-2019 ಗುರುವಾರ |
| 7 | ಮತಗಳ ಎಣಿಕೆಯ ದಿನಾಂಕ ಮತ್ತು ದಿನ ಬೆಳಿಗ್ಗೆ 8.00 ಘಂಟೆಯಿಂದ ತಾಲ್ಲೂಕಿನ ಕೇಂದ್ರ ಸ್ಥಳದಲ್ಲಿ | 31-05-2019 ಶುಕ್ರವಾರ |
| 8 | ಚುನಾವಣೆಯನ್ನು ಯಾವ ದಿನಾಂಕಕ್ಕೆ ಮುಂಚೆ ಮುಕ್ತಾಯಗೊಳಿಸಬೇಕೋ ಆ ದಿನಾಂಕ ಮತ್ತು ದಿನ | 31-05-2019 ಶುಕ್ರವಾರ |

ಜಿಲ್ಲಾಧಿಕಾರಿಗಳು ಆಯೋಗವು ಆದೇಶಿಸಿದ ಚುನಾವಣಾ ವೇಳಾಪಟ್ಟಿಯನ್ನು ಅನುಸರಿಸಿ ಕರ್ನಾಟಕ ಮುನಿಸಿಪಾಲಿಟಿಸ್ (ಎಲೆಕ್ಷನ್ ಆಫ್ ಕೌನ್ಸಿಲರ್ಸ್) ನಿಯಮಗಳು 1977 ರ ನಿಯಮ 8 ರ ಪ್ರಕಾರ ನಗರಸಭೆ ಮತ್ತು ಪುರಸಭೆಗಳಿಗೆ ಸಂಬಂಧಿಸಿದ ಚುನಾವಣಾ ಅಧಿಸೂಚನೆಯನ್ನು ಪ್ರಪತ್ರ–1 ರಲ್ಲಿ ಹೊರಡಿಸತಕ್ಕದ್ದು. ಹಾಗೆ ಹೊರಡಿಸಲಾದ ಅಧಿಸೂಚನೆಯನ್ನು ಅದೇ ದಿನದಂದು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸತಕ್ಕದ್ದು. ಪ್ರಕಟಿತ ಅಧಿಸೂಚನೆಯ ಪ್ರತಿಗಳನ್ನು ಜಿಲ್ಲಾಧಿಕಾರಿ ಕಛೇರಿ, ಸಂಬಂಧಪಟ್ಟ ನಗರ ಸ್ಥಳೀಯ ಸಂಸ್ಥೆಗಳ ಕಛೇರಿ ಹಾಗೂ ಇನ್ನಿತರ ಮುಖ್ಯ ಸ್ಥಳಗಳಲ್ಲಿಯೂ ಸಹಾ ಪ್ರದರ್ಶಿಸತಕ್ಕದ್ದು ಹಾಗೂ ಆಯೋಗಕ್ಕೆ ಅಂದೇ ಇ–ಮೇಲ್ ಮೂಲಕ ಕಳುಹಿಸುವುದು.

ಅಧಿಸೂಚನೆಯ ಪ್ರತಿಯೊಂದಿಗೆ ಸಂಬಂಧಿಸಿದ ಚುನಾವಣಾಧಿಕಾರಿಗಳಿಗೆ ಕಳುಹಿಸಿಕೊಟ್ಟು ಅದೇ ದಿನದಂದು ಪ್ರಪತ್ರ–1ಎ ರಲ್ಲಿ ಚುನಾವಣಾ ನೋಟೀಸನ್ನು ಪ್ರಕಟಿಸುವಂತೆ ಸೂಚನೆಗಳನ್ನು ನೀಡತಕ್ಕದ್ದು ಹಾಗೂ ಚುನಾವಣೆ ಪ್ರಕ್ರಿಯೆಯನ್ನು ಪ್ರಕಟಿಸುವಂತೆ ಸೂಚಿಸುವುದು. ಚುನಾವಣೆ ನಡೆಯುವ ನಗರ ಸ್ಥಳೀಯ ಸಂಸ್ಥೆ ಹೆಸರು, ವಾರ್ಡುಗಳ ಸಂಖ್ಯೆ, ಮೀಸಲಾತಿ ವಿವರಗಳನ್ನು ಸ್ಪಷ್ಟವಾಗಿ ನಮೂದಿಸುವಂತೆ ಸೂಚನೆಗಳನ್ನು ನೀಡತಕ್ಕದ್ದು. ಸಾರ್ವಜನಿಕರ ಮಾಹಿತಿಗಾಗಿ ದಿನಪತ್ರಿಕೆಗಳಲ್ಲಿ ಹಾಗೂ ಸ್ಥಳೀಯ ಪತ್ರಿಕೆಗಳಲ್ಲಿ (ವೆಚ್ಚ ಬಾರದಂತೆ) ಪ್ರಕಟಿಸಲು ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳುವುದು. ಚುನಾವಣಾಧಿಕಾರಿ/ ಸಹಾಯಕ ಚುನಾವಣಾಧಿಕಾರಿಗಳನ್ನು ನೇಮಿಸಿ ನೇಮಕಾತಿ ಆದೇಶದ ಪ್ರತಿಯನ್ನು ಆಯೋಗಕ್ಕೆ ಕಳುಹಿಸುವುದು.

**ವಿಶೇಷ ಸೂಚನೆ :–**

1. ಈಗಾಗಲೇ ನೀಡಿರುವ ನಿರ್ದೇಶನಗಳಂತೆ, ಉಪಚುನಾವಣೆ ನಡೆಯಲಿರುವ ನಗರ ಸ್ಥಳೀಯ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಹಾಲಿ ಚಾಲ್ತಿಯಲ್ಲಿರುವ ವಿಧಾನಸಭಾ ಮತದಾರರ ಪಟ್ಟಿಯನ್ನು ಅಳವಡಿಸಿಕೊಂಡು ತಯಾರಿಸಲಾಗುವ ಮತದಾರರ ಪಟ್ಟಿಯಂತೆ ಚುನಾವಣೆ ನಡೆಸುವುದು.
2. ಉಪಚುನಾವಣೆ ನಡೆಸಲಾಗುವ ನಗರ ಸ್ಥಳೀಯ ಸಂಸ್ಥೆಗಳ ಚುನಾವಣಾಧಿಕಾರಿ ಹಾಗೂ ಸಹಾಯಕ ಚುನಾವಣಾಧಿಕಾರಿಗಳನ್ನು ನೇಮಕ ಮಾಡಿ ಅವರಿಗೆ ತರಬೇತಿಯನ್ನು ಹಾಗೂ ಚುನಾವಣೆಗೆ ಸಂಬಂಧಪಟ್ಟ ಎಲ್ಲಾ ಅಗತ್ಯ ಮಾಹಿತಿ ಹಾಗೂ ಸುತ್ತೋಲೆ ನಿರ್ದೇಶನ ಪತ್ರಗಳ ಪ್ರತಿಯನ್ನು ನೀಡುವುದು.
3. ನೀತಿ ಸಂಹಿತೆ ಉಲ್ಲಂಘನೆ ಪ್ರಕರಣಗಳು ಗಮನಕ್ಕೆ ಬಂದಾಗ ಆಯೋಗದ ಆದೇಶ ಸಂಖ್ಯೆ: ಎಸ್‌ಇಸಿ.10. ಎಂಐಎಸ್‌ಸಿ.2016 ದಿನಾಂಕ: 29–06–2016 ಹಾಗೂ ತಿದ್ದುಪಡಿ ದಿನಾಂಕ: 06–07–2016 ರಂತೆ ಕ್ರಮವಹಿಸುವುದು.
4. ಉಪಚುನಾವಣೆ ನಡೆಸಲಾಗುತ್ತಿರುವ ನಗರ ಸ್ಥಳೀಯ ಸಂಸ್ಥೆಗಳ ಬಗ್ಗೆ ಸಾರ್ವಜನಿಕರ ಮಾಹಿತಿಗಾಗಿ ಸ್ಥಳೀಯ ಪತ್ರಿಕೆಗಳಲ್ಲಿ ಸುದ್ದಿಯಾಗಿ (ವೆಚ್ಚ ಬಾರದಂತೆ) ಪ್ರಕಟಿಸಲು ಸೂಕ್ತ ಕ್ರಮ ತೆಗೆದುಕೊಳ್ಳುವುದು.
5. ಕಾಲಕಾಲಕ್ಕೆ ಚುನಾವಣೆಗೆ ಸಂಬಂಧಿಸಿದ ವರದಿಯನ್ನು ಆಯೋಗಕ್ಕೆ ಸಲ್ಲಿಸವುದು.
6. ರಾಜ್ಯ ಚುನಾವಣಾ ಆಯೋಗದ ಆದೇಶ ಸಂಖ್ಯೆ: ರಾಚುಆ.14.ಇಯುಬಿ.2017 ದಿನಾಂಕ: 10–03–2017 ರಂತೆ ಮತಪತ್ರದಲ್ಲಿ "NOTA" ಅವಕಾಶ ಕಲ್ಪಿಸಲು ಆದೇಶಿಸಿದೆ.
7. ರಾಜ್ಯ ಚುನಾವಣಾ ಆಯೋಗದ ಆದೇಶ ಸಂಖ್ಯೆ:ರಾಚುಆ.28.ಇಯುಬಿ.2018 ದಿನಾಂಕ: 01–06–2018 ರಂತೆ ಮತಪತ್ರದಲ್ಲಿ ಎಲ್ಲಾ ಅಭ್ಯರ್ಥಿಗಳ ಹೆಸರಿನ ಮುಂದೆ ಅವರ ಇತ್ತೀಚಿನ ಭಾವಚಿತ್ರ ಮುದ್ರಿಸುವಂತೆ ಕ್ರಮ ಕೈಗೊಳ್ಳುವುದು.
8. ಘೋಷಣಾ ಪತ್ರ/ ಪ್ರಮಾಣ ಪತ್ರ : ಮತದಾರನಿಗೆ ಅಭ್ಯರ್ಥಿಯ ಪೂರ್ವಾಪರಗಳನ್ನು ತಿಳಿದುಕೊಳ್ಳಲು ಸ್ಪರ್ಧಿಸುವ ಪ್ರತಿಯೊಬ್ಬ ಅಭ್ಯರ್ಥಿಯು ನಾಮಪತ್ರದೊಂದಿಗೆ ತನ್ನ ಹಿನ್ನಲೆ, ಚರಾಸ್ತಿ ಮತ್ತು ಸ್ಥಿರಾಸ್ತಿಗಳ ವಿವರಗಳನ್ನು, ತನ್ನ ಸ್ವವಿವರ, ವಿದ್ಯಾರ್ಹತೆ ಆದಾಯದ ಮೂಲಗಳನ್ನು ಪರಿಷ್ಕೃತ ನಮೂನೆಯಲ್ಲಿ ಘೋಷಣಾ ಪತ್ರ/ ಪ್ರಮಾಣ ಪತ್ರ (Affidavit) ಸಲ್ಲಿಸಬೇಕಾಗಿರುತ್ತದೆ.

ಉಪಚುನಾವಣೆ ನಡೆಯುವ ನಗರ ಸ್ಥಳೀಯ ಸಂಸ್ಥೆಗಳ ವಾರ್ಡ್ ವ್ಯಾಪ್ತಿಯಲ್ಲಿ ಚುನಾವಣಾ ನೀತಿ ಸಂಹಿತೆಯು ದಿನಾಂಕ: 09–05–2019 ರಿಂದ ಜಾರಿಗೆ ಬರಲಿದ್ದು, ದಿನಾಂಕ: 31–05–2019 ರವರೆಗೆ ಜಾರಿಯಲ್ಲಿರುತ್ತದೆ. ಜಿಲ್ಲಾಧಿಕಾರಿಗಳು ಸದಾಚಾರ ಸಂಹಿತೆಯು ಯಾವುದೇ ರೀತಿಯಲ್ಲೂ ಉಲ್ಲಂಘನೆಯಾಗದಂತೆ ನೋಡಿಕೊಳ್ಳತಕ್ಕದ್ದು.

ಆದೇಶಾನುಸಾರ

**ಎನ್.ಆರ್.ನಾಗರಾಜು**
ಅಧೀನ ಕಾರ್ಯದರ್ಶಿ
ರಾಜ್ಯ ಚುನಾವಣಾ ಆಯೋಗ, ಕರ್ನಾಟಕ

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಡಿ7) ಪ್ರತಿಗಳು: 25